# ಜಾಹೀರಾತು

ಭಾರತ ಸ್ವಾತಂತ್ರ್ಯ ಅಮೃತ ಮಹೋತ್ಸವದ ಸವಿನೆನಪಿಗಾಗಿ ನಮ್ಮ ಸರ್ಕಾರ ಈ ಕೆಳಕಂಡ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಿದೆ.

**ಅಮೃತ ಗ್ರಾಮ ಪಂಚಾಯ್ತಿಗಳು :**

ರಾಜ್ಯದ ಆಯ್ದ 750 ಗ್ರಾಮ ಪಂಚಾಯ್ತಿಗಳಲ್ಲಿ ಬೀದಿ ದೀಪಗಳು, ಪ್ರತಿ ಮನೆಗೆ ಕುಡಿಯುವ ನೀರಿನ ಸರಬರಾಜು, ಶೇಕಡಾ 100 ರಷ್ಟು ಘನ ತ್ಯಾಜ್ಯ ವಿಂಗಡಣೆ ಹಾಗೂ ವಿಲೇವಾರಿ, ತ್ಯಾಜ್ಯ ನೀರನ್ನು ವೈಜ್ಞಾನಿಕವಾಗಿ ವಿಸರ್ಜಿಸುವುದು, ಸೌರವಿದ್ಯುತ್ ಅಳವಡಿಕೆ, ಡಿಜಿಟಲ್ ಲೈಬ್ರರಿಗಳೊಂದಿಗೆ ಸುಸಜ್ಜಿತವಾದ ಶಾಲೆಗಳನ್ನು ಸ್ಥಾಪಿಸಿ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡುವ ಯೋಜನೆ.

**ಅಮೃತ ಗ್ರಾಮೀಣ ವಸತಿ ಯೋಜನೆ :**

ರಾಜ್ಯದ ಆಯ್ದ 750 ಗ್ರಾಮ ಪಂಚಾಯ್ತಿಗಳಲ್ಲಿ ವಸತಿ ರಹಿತ ಮತ್ತು ಆಶ್ರಯ ರಹಿತರನ್ನು ಗುರುತಿಸಿ, ಸರ್ವರಿಗೂ ವಸತಿ ಕಲ್ಪಿಸುವ ಯೋಜನೆ.

**ಅಮೃತ ರೈತ ಉತ್ಪಾದಕ ಸಂಸ್ಥೆಗಳು :**

ರೈತ, ನೇಕಾರ ಮತ್ತು ಮೀನುಗಾರರ ಉತ್ಪನ್ನಗಳ ಉತ್ಪಾದನೆ ಹಾಗೂ ಮಾರಾಟಕ್ಕೆ ವಿಶೇಷ ಪ್ರೋತ್ಸಾಹ ನೀಡಲು 750 ಅಮೃತ ರೈತ ಉತ್ಪಾದಕ ಸಂಸ್ಥೆಗಳನ್ನು ಸ್ಥಾಪಿಸಿ, ಪ್ರತಿ ಸಂಸ್ಥೆಗೆ 30.00 ಲಕ್ಷ ರೂ.ನಂತೆ ಮೂರು ವರ್ಷದ ಅವಧಿಗೆ 225.00 ಕೋಟಿ ರೂ. ಅನುದಾನ ನೀಡಲಾಗುವುದು.

**ಅಮೃತ ನಿರ್ಮಲ ನಗರ :**

ರಾಜ್ಯದ ಆಯ್ದ 75 ನಗರ ಸ್ಥಳೀಯ ಸಂಸ್ಥೆಗಳ ಸ್ವಚ್ಛತೆ ಮತ್ತು ಸೌಂದರ್ಯ ಕಾಪಾಡಿಕೊಳ್ಳಲು ಅಮೃತ ನಿರ್ಮಲ ನಗರ ಯೋಜನೆ ರೂಪಿಸಿ, ಪ್ರತಿ ಸ್ಥಳೀಯ ಸಂಸ್ಥೆಗೆ ಒಂದು ಕೋಟಿ ರೂ.ಗಳಂತೆ 75.00 ಕೋಟಿ ರೂ. ಅನುದಾನ.

**ಅಮೃತ ಶಾಲಾ ಸೌಲಭ್ಯ ಯೋಜನೆ :**

ರಾಜ್ಯದ ಆಯ್ದ 750 ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯ ಸೇರಿದಂತೆ ಸಮಗ್ರ ಸೌಲಭ್ಯ ಒದಗಿಸಲು ತಲಾ 10.00 ಲಕ್ಷ ರೂ. ಗಳಂತೆ ಒಟ್ಟು 75.00 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುವುದು.

**ಅಮೃತ ಅಂಗನವಾಡಿ ಕೇಂದ್ರಗಳು :**

ರಾಜ್ಯದ ಆಯ್ದ 750 ಅಂಗನವಾಡಿ ಕೇಂದ್ರಗಳ ಮೂಲ ಸೌಕರ್ಯ ಮೇಲ್ದರ್ಜೆಗೇರಿಸಲು ಪ್ರತಿ ಅಂಗನವಾಡಿಗೆ 1.00 ಲಕ್ಷ ರೂ.ಗಳಂತೆ 7.50 ಕೋಟಿ ರೂ.ಗಳನ್ನು ವಿನಿಯೋಗಿಸುವುದು.

**ಅಮೃತ ಸ್ವಸಹಾಯ ಕಿರು ಉದ್ದಿಮೆಗಳು :**

ರಾಜ್ಯದ ಆಯ್ದ 7500 ಸ್ವಸಹಾಯ ಗುಂಪುಗಳನ್ನು ಕಿರು ಉದ್ದಿಮೆ ಸಂಸ್ಥೆಗಳಾಗಿ ರೂಪಿಸಲು ತಲಾ 1.00 ಲಕ್ಷ ರೂ.ಗಳಂತೆ 75.00 ಕೋಟಿ ರೂ.ಗಳನ್ನು ಬೀಜ ಧನವನ್ನು ಒದಗಿಸುವುದು.

**ಅಮೃತ ಸಮುದಾಯ ಅಭಿವೃದ್ಧಿ ಯೋಜನೆ :**

ರಾಜ್ಯದ ಆಯ್ದ 750 ಶಾಲಾ ಕಾಲೇಜುಗಳ ವಿದ್ಯಾರ್ಥಿಗಳನ್ನು ಗುರುತಿಸಿ, ರಚನಾತ್ಮಕ ಸಾಮೂದಾಯಿಕ ಸೇವೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಲಾಗುವುದು.

–2–

**ಅಮೃತ ಆರೋಗ್ಯ ಮೂಲ ಸೌಕರ್ಯ ಉನ್ನತೀಕರಣ ಯೋಜನೆ :**

ರಾಜ್ಯದ ಆಯ್ದ 750 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲ ಸೌಕರ್ಯಗಳ ವಿಸ್ತರಣೆ ಮತ್ತು ಉನ್ನತೀಕರಣಕ್ಕೆ ತಲಾ 20.00 ಲಕ್ಷ ರೂ.ಗಳಂತೆ 150.00 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುವುದು.

**ಅಮೃತ ಕೌಶಲ್ಯ ತರಬೇತಿ ಯೋಜನೆ :**

ರಾಜ್ಯದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ಸಮುದಾಯಗಳ 75000 ಯುವಕ, ಯುವತಿಯರ ಕೌಶಾಲ್ಯಭಿವೃದ್ಧಿಗೆ ಎರಡು ವರ್ಷಗಳ ತರಬೇತಿ ಯೋಜನೆಯನ್ನು 112.00 ಕೋಟಿ ರೂ.ಗಳ ವೆಚ್ಚದಲ್ಲಿ ಹಮ್ಮಿಕೊಳ್ಳಲಾಗುವುದು.

**ಅಮೃತ ಕ್ರೀಡಾ ದತ್ತು ಯೋಜನೆ :**

2024 ರ ಪ್ಯಾರೀಸ್‌ನಲ್ಲಿ ನಡೆಯುವ ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ತೋರಿ ಪದಕ ವಿಜೇತ ಸಾಮರ್ಥ್ಯವುಳ್ಳ ಆಯ್ದ 75 ಕ್ರೀಡಾಪಟುಗಳನ್ನು ಗುರುತಿಸಿ, ಅಗತ್ಯ ತರಬೇತಿ ಮತ್ತು ಪ್ರೋತ್ಸಾಹ ನೀಡುವುದು.

**ಅಮೃತ ಬೆಂಗಳೂರು ನಗರ ಕೆರೆ ಅಭಿವೃದ್ಧಿ ಯೋಜನೆ :**

ಬೆಂಗಳೂರು ನಗರದ ಆಯ್ದ 75 ಕೆರೆಗಳನ್ನು ಗುರುತಿಸಿ, ಮೂಲ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಿ, ಉತ್ತಮ ವಾತಾವರಣವನ್ನು ನಿರ್ಮಾಣ ಮಾಡುವುದರ ಮೂಲಕ ಸಾರ್ವಜನಿಕರಿಗೆ ಉತ್ತಮ ಪರಿಸರ ನಿರ್ಮಾಣ.

**ಅಮೃತ ಬೆಂಗಳೂರು ಕೊಳಚೆ ಪ್ರದೇಶಗಳ ಅಭಿವೃದ್ಧಿ ಯೋಜನೆ :**

ಬೆಂಗಳೂರು ನಗರದ ಆಯ್ದ 75 ಕೊಳಚೆ ಪ್ರದೇಶಗಳನ್ನು ಗುರುತಿಸಿ, ಮೂಲ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಕೊಳಚೆ ಪ್ರದೇಶದ ನಿವಾಸಿಗಳಿಗೆ ಉತ್ತಮ ವಾತಾವರಣವನ್ನು ಕಲ್ಪಿಸುವುದು.

**ಅಲ್ಪಾವಧಿ ಗುರಿಗಳು :**

ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಅವಶ್ಯವಿರುವ ಹಾಗೂ ತುರ್ತಾಗಿ ಜಾರಿಗೊಳಿಸಬಹುದಾದ ನೂತನ ಯೋಜನೆಗಳ ಜಾರಿ ಹಾಗೂ ಅನುಷ್ಠಾನ.

**ದೀರ್ಘಾವಧಿ ಗುರಿಗಳು :**

ಕರ್ನಾಟಕ ರಾಜ್ಯವು ಪ್ರಸ್ತುತ ತಲಾದಾಯದಲ್ಲಿ ದೇಶದಲ್ಲಿಯೇ ಮೂರನೇ ಸ್ಥಾನದಲ್ಲಿದ್ದು, ಭಾರತ ಸ್ವಾತಂತ್ರ್ಯದ ಸುವರ್ಣ ಮಹೋತ್ಸವ ಆಚರಣೆಯ ಸಂದರ್ಭದಲ್ಲಿ ರಾಜ್ಯವು ಮೊದಲ ಸ್ಥಾನದಲ್ಲಿರುವಂತೆ ದೀರ್ಘಾವಧಿ ಗುರಿಗಳನ್ನು ಹಾಕಿಕೊಂಡು ತಲಾದಾಯ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.

**ಜನಸ್ನೇಹಿ ಆಡಳಿತ :**

"ಅಭಿವೃದ್ಧಿಯೇ ಆಡಳಿತ ಮಂತ್ರ" ಎಂಬ ಧ್ಯೇಯದೊಂದಿಗೆ ವಿಶ್ವಾಸಾರ್ಹ, ದಕ್ಷ, ಪ್ರಾಮಾಣಿಕ, ಪಾರದರ್ಶಕ, ಜನಸ್ನೇಹಿ ಆಡಳಿತ ನೀಡುವುದು ಹಾಗೂ ಅಭಿವೃದ್ಧಿ ಚಕ್ರವನ್ನು ಮುನ್ನಡೆಸುವುದು. ನಿಗದಿತ ಅವಧಿಯೊಳಗೆ ಯೋಜನೆಗಳ ಅನುಷ್ಠಾನ ಮತ್ತು ಜನರ ಸಮಸ್ಯೆಗಳಿಗೆ ತ್ವರಿತ ಸ್ಪಂದನ.

–3–

**ನಗರಾಭಿವೃದ್ಧಿ ಮತ್ತು ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಸಮಾನ ಮಹತ್ವ :**

ದೇಶದಲ್ಲಿ ಅತ್ಯಂತ ಪ್ರಗತಿಪರ ರಾಜ್ಯವೆಂದು ಮನ್ನಣೆ ಪಡೆದಿರುವ ಕರ್ನಾಟಕ ರಾಜ್ಯದ ಕೃಷಿ, ಕೈಗಾರಿಕೆ, ಆರೋಗ್ಯ, ಶಿಕ್ಷಣ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ನಮ್ಮ ಅಧ್ಯತೆಯ ವಲಯ ಹಾಗೂ ನಗರಾಭಿವೃದ್ಧಿ ಮತ್ತು ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಸಮಾನ ಮಹತ್ವ ನೀಡಲಾಗುತ್ತಿದೆ.

**ನೀರಾವರಿ ಯೋಜನೆಗಳಿಗೆ ವೇಗ :**

ರಾಜ್ಯದ ಮಹತ್ವದ ನೀರಾವರಿ ಯೋಜನೆಗಳಿಗೆ ಕೇಂದ್ರ ಸರ್ಕಾರ ಹಾಗೂ ನ್ಯಾಯಾಲಯಗಳ ಮೂಲಕ ಕಾನೂನಾತ್ಮಕವಾಗಿ ತ್ವರಿತವಾಗಿ ಸಮಸ್ಯೆಗಳನ್ನು ಬಗೆಹರಿಸಿ ನೀರಾವರಿ ಯೋಜನೆಗಳ ತ್ವರಿತ ಅನುಷ್ಠಾನ.

**ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಪ್ರತ್ಯೇಕ ಸಚಿವಾಲಯ :**

ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕೆ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಇದರಿಂದ 50 ಲಕ್ಷ ಜನರಿಗೆ ಅನುಕೂಲವಾಗಲಿದೆ.

**ಕಾನೂನು ಸುವ್ಯವಸ್ಥೆಗೆ ಪ್ರಥಮ ಆದ್ಯತೆ :**

ರಾಜ್ಯದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವುದರೊಂದಿಗೆ ಎಲ್ಲಾ ರೀತಿಯ ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕುವುದು ಹಾಗೂ ಸಮಾಜದಲ್ಲಿ ಶಾಂತಿಯನ್ನು ಕಾಪಾಡುವುದು ನಮ್ಮ ಸರ್ಕಾರದ ಮೊದಲ ಆದ್ಯತೆಯಾಗಿದೆ.

**ಕೋವಿಡ್ ಸಮರ್ಥ ನಿರ್ವಹಣೆ :**

ಜಾಗತಿಕ ಮಹಾಮಾರಿ ಕೋವಿಡ್–19 ಈಗಾಗಲೇ ಎರಡು ಅಲೆಗಳಿಂದ ಉದ್ಭವಿಸಿರುವ ಸಮಸ್ಯೆಗಳನ್ನು ಮೆಟ್ಟಿ ನಿಲ್ಲಲಾಗಿದ್ದು, ಮುಂದಿನ ಮೂರನೇ ಅಲೆಯನ್ನು ಸಮರ್ಥವಾಗಿ ಎದುರಿಸಲು ರಾಜ್ಯ ಸಕಲ ರೀತಿಯಲ್ಲಿ ಸನ್ನದ್ದವಾಗಿದೆ.

**ಸಂಗೊಳ್ಳಿ ರಾಯಣ್ಣ ಜಯಂತಿ ಆಚರಣೆ :**

ಭಾರತ ಸ್ವಾತಂತ್ರ್ಯದ ಈ ಅಮೃತ ಮಹೋತ್ಸವದ ಶುಭ ಸಂದರ್ಭದಲ್ಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿ, ವೀರ ಮರಣ ಹೊಂದಿದ ಸಂಗೊಳ್ಳಿ ರಾಯಣ್ಣ ಜಯಂತಿಯನ್ನು ಆಗಸ್ಟ್ 15 ರಂದು ಸರ್ಕಾರದ ವತಿಯಿಂದ ಆಚರಿಸಲು ಆದೇಶ ಹೊರಡಿಸಲಾಗಿದೆ.

*************